# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಶ್ರೀ ಪಿ.ಎಲ್.ತೇರಗಾಂವ್ ಮೇದಾರ್, ಅಂದಿನ ಕಾರ್ಯಪಾಲಕ ಇಂಜಿನಿಯರ್ ಮತ್ತು ಶ್ರೀ ಎನ್.ಯೋಗಣ್ಣ, ಪ್ರಥಮ ದರ್ಜೆ ಲೆಕ್ಕ ಸಹಾಯಕ, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಚನ್ನರಾಯಪಟ್ಟಣ ಇವರ ವಿರುದ್ಧ ಇಲಾಖಾ ವಿಚಾರಣೆ ಬಗ್ಗೆ.

**ಓದಲಾಗಿದೆ:-** ಉಪ ನಿಬಂಧಕರು, ವಿಚಾರಣೆಗಳು-1. ಕರ್ನಾಟಕ ಲೋಕಾಯುಕ್ತ ಕಚೇರಿ, ಬೆಂಗಳೂರು ಇವರ ಅರೆ ಸರ್ಕಾರಿ ಪತ್ರ ಸಂಖ್ಯೆ. ಕಂಪ್ಲೆಂಟ್ /ಉಪಲೋಕ್ /ಎಂವೈಎಸ್-157 /2012/ ಡಿಆರ್ಇ-1, ದಿನಾಂಕ. 17-09-2012.

------

**ಪ್ರಸ್ತಾವನೆ**

ಹೊಳೆನರಸೀಪುರ ತಾಲ್ಲೂಕು, ಈಚನಹಳ್ಳಿ ಗ್ರಾಮದಲ್ಲಿ 2007-08ನೇ ಸಾಲಿನಲ್ಲಿ ರೂ. 6,70,000/- ಅಂದಾಜಿನಲ್ಲಿ ಸಮುದಾಯ ಭವನದ ಕಾಮಗಾರಿ ಪೂರ್ಣಗೊಂಡ ನಂತರ ಕಿರಿಯ ಇಂಜಿನಿಯರ್ ಮತ್ತು ಸಹಾಯಕ ಇಂಜಿನಿಯರ್‌ಗಳು ರೂ. 3.00 ಲಕ್ಷ ಮೊತ್ತದ ಬಿಲ್ಲನ್ನು ಸಲ್ಲಿಸಿದ್ದರು. ಈ ಬಿಲ್ಲನ್ನು ಬಿಡುಗಡೆ ಮಾಡಲು ಶ್ರೀ ಪಿ.ಎಲ್.ತೇರಗಾಂವ್ ಮೇದಾರ್, ಅಂದಿನ ಕಾರ್ಯಪಾಲಕ ಇಂಜಿನಿಯರ್ ಮತ್ತು ಶ್ರೀ ಎನ್.ಯೋಗಣ್ಣ, ಪ್ರಥಮ ದರ್ಜೆ ಲೆಕ್ಕ ಸಹಾಯಕ, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಚನ್ನರಾಯಪಟ್ಟಣ ಇವರುಗಳು ರೂ. 8,500/- ರೂ.ಗಳ ಅಕ್ರಮ ಸಂಭಾವನೆ ಒತ್ತಾಯಿಸಿರುತ್ತಾರೆಂದು ಶ್ರೀ ಹೆಚ್.ಡಿ.ರಮೇಶ್, ಹೊಳೆನರಸೀಪುರ ಇವರು ಕರ್ನಾಟಕ ಲೋಕಾಯುಕ್ತಕ್ಕೆ ದೂರು ಸಲ್ಲಿಸಿದ್ದರು. ಈ ದೂರಿನ ಮೇರೆಗೆ ಜರುಗಿಸಿದ ತನಿಖೆಯಲ್ಲಿ, ಶ್ರೀ ಪಿ.ಎಲ್.ತೇರಗಾಂವ್ ಮೇದಾರ್, ಅಂದಿನ ಕಾರ್ಯಪಾಲಕ ಇಂಜಿನಿಯರ್ ಮತ್ತು ಶ್ರೀ ಎನ್.ಯೋಗಣ್ಣ, ಪ್ರಥಮ ದರ್ಜೆ ಲೆಕ್ಕ ಸಹಾಯಕ ಇವರುಗಳು ಲಂಚದ ಹಣ ಪಡೆದಿರುವುದು ಮೇಲ್ನೋಟಕ್ಕೆ ಕಂಡುಬಂದಿರುವುದರಿಂದ ಇವರುಗಳ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957 ರ ನಿಯಮ 14 (ಎ) ರ ಪ್ರಕಾರ ಇಲಾಖಾ ವಿಚಾರಣೆ ಜರುಗಿಸಲು ಕರ್ನಾಟಕ ಉಪ ಲೋಕಾಯುಕ್ತ-1 ರವರು ಮೇಲೆ ದಿನಾಂಕ. 17-09-2012ರ ಪತ್ರದೊಂದಿಗೆ ಕಳುಹಿಸಿರುವ ವರದಿಯಲ್ಲಿ ಶಿಫಾರಸ್ಸು ಮಾಡಿದ್ದಾರೆ.

ಕರ್ನಾಟಕ ಉಪ ಲೋಕಾಯುಕ್ತರ ವರದಿ ಮತ್ತು ದಾಖಲೆಗಳನ್ನು ಪರಿಶೀಲಿಸಲಾಗಿ, ಶ್ರೀ ಪಿ.ಎಲ್.ತೇರಗಾಂವ್ ಮೇದಾರ್, ಅಂದಿನ ಕಾರ್ಯಪಾಲಕ ಇಂಜಿನಿಯರ್ ಮತ್ತು ಶ್ರೀ ಎನ್.ಯೋಗಣ್ಣ, ಪ್ರಥಮ ದರ್ಜೆ ಲೆಕ್ಕ ಸಹಾಯಕ, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಚನ್ನರಾಯಪಟ್ಟಣ ಇವರುಗಳು ರೂ. 8,500/- ರೂ.ಗಳ ಅಕ್ರಮ ಸಂಭಾವನೆ ಪಡೆದಿರುವುದು ಮೇಲ್ನೋಟಕ್ಕೆ ಕಂಡುಬರುತ್ತದೆ. ಆದ್ದರಿಂದ, ಸದರಿಯವರುಗಳ ವಿರುದ್ಧ ಜಂಟಿ ಇಲಾಖಾ ವಿಚಾರಣೆ ಜರುಗಿಸಲು ಪ್ರಕರಣವನ್ನು ಕರ್ನಾಟಕ ಉಪ ಲೋಕಾಯುಕ್ತ-1 ರವರಿಗೆ ವಹಿಸಲು ಸರ್ಕಾರವು ನಿರ್ಧರಿಸಿ, ಈ ಮುಂದಿನಂತೆ ಆದೇಶಿಸಿದೆ.

**ಆದೇಶ ಸಂಖ್ಯೆ ಗ್ರಾಅಪ 20 ಇಎನ್‌ಕ್ಯೂ 2009, ಬೆಂಗಳೂರು, ದಿನಾಂಕ. 17-10-2012**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ, ಶ್ರೀ ಪಿ.ಎಲ್.ತೇರಗಾಂವ್ ಮೇದಾರ್, ಅಂದಿನ ಕಾರ್ಯಪಾಲಕ ಇಂಜಿನಿಯರ್ ಮತ್ತು ಶ್ರೀ ಎನ್.ಯೋಗಣ್ಣ, ಪ್ರಥಮ ದರ್ಜೆ ಲೆಕ್ಕ

---2

ಸಹಾಯಕ, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಚನ್ನರಾಯಪಟ್ಟಣ - ಇವರುಗಳ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 14(ಎ) ರ ಪ್ರಕಾರ ಜಂಟಿ ಇಲಾಖಾ ವಿಚಾರಣೆ ನಡೆಸಲು ಪ್ರಕರಣವನ್ನು ಕರ್ನಾಟಕ ಉಪ ಲೋಕಾಯುಕ್ತ-1 ರವರಿಗೆ ವಹಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

17/10/12
(ಎನ್.ವೈ.ಸಾಗರ)
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಎ),
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಇವರಿಗೆ

ಸಂಕಲನಕಾರರು,ಕರ್ನಾಟಕ ರಾಜ್ಯಪತ್ರ, ಬೆಂಗಳೂರು.

ಪ್ರತಿ:

1. ಮಹಾಲೇಖಪಾಲರು, (ಅ ಮತ್ತು ಇ) ಕರ್ನಾಟಕ, ಬೆಂಗಳೂರು.
2. ಉಪ ಲೋಕಾಯುಕ್ತ-1, ಕರ್ನಾಟಕ ಲೋಕಾಯುಕ್ತ ಕಚೇರಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಉಪ ನಿಬಂಧಕರು, ವಿಚಾರಣೆಗಳು-1. ಕರ್ನಾಟಕ ಲೋಕಾಯುಕ್ತ ಕಚೇರಿ, ಬೆಂಗಳೂರು.
4. ಸರ್ಕಾರದ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ / ಜಲಸಂಪನ್ಮೂಲ ಇಲಾಖೆ.
5. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು.
6. ಮುಖ್ಯ ಕಾರ್ಯಾಚರಣೆ ಅಧಿಕಾರಿ, ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆ, ಬೆಂಗಳೂರು.
7. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು (ದಕ್ಷಿಣ), ಬೆಂಗಳೂರು.
8. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಹಾಸನ.
9. ಶ್ರೀ ಪಿ.ಎಲ್.ತೇರಗಾಂವ್ ಮೇದಾರ್, ಅಂದಿನ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಚನ್ನರಾಯಪಟ್ಟಣ - ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಹಾಸನ ಇವರ ಮುಖಾಂತರ
10. ಶ್ರೀ ಎನ್. ಯೋಗಣ್ಣ, ಪ್ರಥಮ ದರ್ಜೆ ಲೆಕ್ಕ ಸಹಾಯಕ, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಚನ್ನರಾಯಪಟ್ಟಣ.
11. ಮಾನ್ಯ ಉಪ ಮುಖ್ಯ ಮಂತ್ರಿಯವರ ಆಪ್ತ ಕಾರ್ಯದರ್ಶಿಯವರಿಗೆ.
12. ಅಧೀನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ (ಸೇವೆಗಳು - ಸಿ).
13. ಗ್ರಾ.ಅ.ಪಂ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿ (ಪಂ.ರಾಜ್) / ಉಪ ಕಾರ್ಯದರ್ಶಿ(ಆಡಳಿತ-1) ಇವರ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರು.
14. ಹೆಚ್ಚುವರಿ ಪ್ರತಿ : ರಕ್ಷಾ ಕಡತ : ಸೂಚನಾ ಫಲಕ : ಕಂಪ್ಯೂಟರ್ ಸೆಲ್